ಮುಂಜಾನೆ ಮಾತು
ನಮ್ಮ ಹಾಗೆ ಅನ್ಯರು ಇರುವುದಿಲ್ಲ, ಪ್ರತಿಯೊಬ್ಬರೂ ಅನನ್ಯರೇ ಎಂಬುದನ್ನು ಅರಿತು ಎಲ್ಲರಿಂದ ಕಲಿಯುತ್ತ ಬೆಳೆಯೋಣ !

ವಿಜಯವಾಣಿ
ಕನ್ನಡಿಗರ ಧ್ವನಿ
ನಂ. 1 ಕನ್ನಡ ದಿನಪತ್ರಿಕೆ

ಬೆಂಗಳೂರು ಮಂಗಳೂರು ಹುಬ್ಬಳ್ಳಿ ವಿಜಯಪುರ ಮೈಸೂರು ಗಂಗಾವತಿ ಚಿತ್ರದುರ್ಗ ಶಿವಮೊಗ್ಗ ಕಲಬುರಗಿ ಬೆಳಗಾವಿ VIJAYAVANI ● MANGALURU ಮಂಗಳೂರು ● ಸಂಪುಟ 7 ● ಸಂಚಿಕೆ 160
vijayavani.net ಇ-ಪೇಪರ್: epapervijayavani.in VVani4U @VVANI4U vijayavaninews@gmail.com ಸಹಾಯವಾಣಿ: 8884411682 7 ಸೆಪ್ಟೆಂಬರ್ 2018 | ಶುಕ್ರವಾರ

CENTRAL LIBRARY

# ವರ್ಲ್ಡ್, ಏಷ್ಯನ್ ಚಾಂಪಿಯನ್‌ಷಿಪ್ ಗುರಿ

## ಏಷ್ಯನ್ ಗೇಮ್ಸ್ ಪದಕ ವಿಜೇತೆ ಪೂವಮ್ಮ ಹೇಳಿಕೆ | ಒಲಿಂಪಿಕ್ಸ್ ಪದಕದತ್ತಲೂ ಗಮನ

■ ವಿಜಯವಾಣಿ ಸುದ್ದಿಜಾಲ ಮಂಗಳೂರು

ಏಷ್ಯನ್ ಗೇಮ್ಸ್‌ನಲ್ಲಿ ಇತರ ವಿಭಾಗಗಳಿಗೆ ಹೋಲಿಸಿದರೆ ಅಥ್ಲೆಟಿಕ್ಸ್‌ನಲ್ಲಿ ಹೆಚ್ಚು ಪದಕ ಸಿಕ್ಕಿದೆ. ನಮ್ಮ ಈ ಸಾಧನೆ ಮುಂದಿನ ವರ್ಷ ನಡೆಯಲಿರುವ ಏಷ್ಯನ್ ಚಾಂಪಿಯನ್‌ಷಿಪ್ ಹಾಗೂ ವಿಶ್ವ ಚಾಂಪಿಯನ್‌ಷಿಪ್‌ನಲ್ಲಿ ಹೆಚ್ಚಿನ ಪದಕ ಗೆಲ್ಲಲು ಪ್ರೇರಣೆಯಾಗಿದೆ. ಅಕ್ಟೋಬರ್‌ನಿಂದ ಮತ್ತೆ ಅಭ್ಯಾಸ ಆರಂಭವಾಗಲಿದ್ದು, 2020ರಲ್ಲಿ ನಡೆಯುವ ಒಲಿಂಪಿಕ್ಸ್ ಕೂಡ ನಮ್ಮ ಗುರಿ ಎಂದು ಏಷ್ಯನ್ ಗೇಮ್ಸ್ ಪದಕ ವಿಜೇತೆ ಎಂ.ಆರ್.ಪೂವಮ್ಮ ಹೇಳಿದರು.

ಇಂಡೋನೇಷ್ಯಾದ ಜಕಾರ್ತದಲ್ಲಿ ನಡೆದ 18ನೇ ಏಷ್ಯನ್ ಗೇಮ್ಸ್‌ನ ರಿಲೇಯಲ್ಲಿ ಚಿನ್ನ ಹಾಗೂ ಬೆಳ್ಳಿ ಪದಕ ಗೆದ್ದ ಅವರು ಗುರುವಾರ ತವರಿಗೆ ಆಗಮಿಸಿದ ಸಂದರ್ಭ ಸುದ್ದಿಗಾರರೊಂದಿಗೆ ಸಾಧನೆ ಕುರಿತು ಮಾತನಾಡಿದರು.

ಬುಧವಾರ ಪ್ರಧಾನಿ ಮೋದಿ ಹಾಗೂ ಕ್ರೀಡಾ ಸಚಿವ ರಾಜ್ಯವರ್ಧನ್ ಸಿಂಗ್ ರಾಥೋಡ್ ಅಭಿನಂದಿಸಿದ್ದಾರೆ. ಮುಂದಿನ ಕ್ರೀಡಾಕೂಟಗಳಲ್ಲಿ ಇನ್ನೂ ಹೆಚ್ಚಿನ ಸಾಧನೆ ಮಾಡುವಂತೆ ಹುರಿದುಂಬಿಸಿದ್ದಾರೆ. ಕ್ರೀಡಾ ಸಚಿವರು ಜಕಾರ್ತಗೆ ಬಂದು ನಮ್ಮೊಡನಿದ್ದು ಪ್ರೋತ್ಸಾಹಿಸಿದ್ದರು. ಹೆತ್ತವರ ಪ್ರೋತ್ಸಾಹ, ಬೆಂಬಲದಿಂದಾಗಿಯೇ ಇಂದು ಈ ಸಾಧನೆ ಮಾಡಲು ಸಾಧ್ಯವಾಗಿದೆ. ಆದಕ್ಕಾಗಿ ಪ್ರಥಮವಾಗಿ ನನ್ನ ಈ ಪದಕಗಳು ಹೆತ್ತವರಿಗೆ ಮತ್ತು ಕೊಡಗಿನಲ್ಲಿ ಸಂಭವಿಸಿದ ಭೂ ಕುಸಿತ ಹಾಗೂ ಪ್ರವಾಹ ಸಂತ್ರಸ್ತರಿಗೆ ಅರ್ಪಿಸುತ್ತೇನೆ ಎಂದರು.



ಇಂಡೋನೇಷ್ಯಾದ ಜಕಾರ್ತದಲ್ಲಿ ನಡೆದ ಏಷ್ಯನ್ ಗೇಮ್ಸ್ ಪದಕ ವಿಜೇತೆ ಎಂ.ಆರ್.ಪೂವಮ್ಮ ಅವರನ್ನು ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಶಾಸಕ ವೇದವ್ಯಾಸ ಕಾಮತ್ ಸ್ವಾಗತಿಸಿ ಸನ್ಮಾನಿಸಿದರು.



ಎಂ.ಆರ್.ಪೂವಮ್ಮ ಅವರನ್ನು ದ.ಕ. ಸಂಸದ ನಳಿನ್ ಕುಮಾರ್ ಕಟೀಲು ಮನೆಗೆ ಭೇಟಿ ನೀಡಿ ಅಭಿನಂದಿಸಿದರು. ಈ ವೇಳೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ರೀತಿಯ ಸಹಕಾರ ನೀಡುವ ಭರವಸೆ ನೀಡಿದರು.

> ಈ ಬಾರಿ ಕಿರಿಯ ಕ್ರೀಡಾಪಟುಗಳೂ ಉತ್ತಮ ಪ್ರದರ್ಶನ ತೋರಿಸಿದ್ದಾರೆ. ಇದರಿಂದಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರಾಯೋಜಕರು ಮುಂದೆ ಬರುತ್ತಿದ್ದಾರೆ. ನಾವು ಜೂನಿಯರ್‌ಗಳಾಗಿದ್ದಾಗ ಈ ರೀತಿಯ ಸಹಕಾರ ಸಿಕ್ಕಿರಲಿಲ್ಲ. ಇದು ಕ್ರೀಡಾಪಟುಗಳ ಭವಿಷ್ಯಕ್ಕೆ ಸಹಕಾರಿಯಾಗಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅಥ್ಲೀಟ್‌ಗಳನ್ನು ಕಾಣುವ ನಿರೀಕ್ಷೆಯಿದೆ.
>
> | ಎಂ.ಆರ್.ಪೂವಮ್ಮ, ಏಷ್ಯನ್ ಗೇಮ್ಸ್ ಪದಕ ವಿಜೇತೆ

ಶುಕ್ರವಾರ,7 ಸೆಪ್ಟೆಂಬರ್ 2018 | ಪುಟಗಳು: 14+4+4 | ಬೆಲೆ: ₹ 5.00
www.vijaykarnataka.com
ಸಂಪುಟ: 18 | ಸಂಚಿಕೆ: 43
VK
ವಿಜಯ ಕರ್ನಾಟಕ
ಮಂಗಳೂರು | ಬೆಂಗಳೂರು | ಮೈಸೂರು | ಶಿವಮೊಗ್ಗ | ಹುಬ್ಬಳ್ಳಿ | ಬಾಗಲಕೋಟ | ಕಲಬುರಗಿ |

ದೇಶದಲ್ಲಿ ಇನ್ನು ಸಲಿಂಗ ಕಾಮ ಅಪರಾಧವಲ್ಲ: ವ್ಯಕ್ತಿ ಸ್ವಾತಂತ್ರ್ಯ ಎತ್ತಿಹಿಡಿದ ಸುಪ್ರೀಂ ತೀರ್ಪು P10

ಪಾಕಿಸ್ತಾನದ ಬಳಿ ಹೆಚ್ಚುತ್ತಿರುವ ಶಸ್ತ್ರಾಸ್ತ್ರ: ಮುಂದಿನ ಕೆಲವೇ ವರ್ಷಗಳಲ್ಲಿ ವಿಶ್ವದ ಐದನೇ ದೊಡ್ಡ ಪರಮಾಣು ಶಕ್ತ ರಾಷ್ಟ್ರಪಟ್ಟ? P10

ಭಾರತ-ಇಂಗ್ಲೆಂಡ್ 5ನೇ ಟೆಸ್ಟ್ ಇಂದಿನಿಂದ ಆಲಿಸ್ಟರ್ ಕುಕ್‌ಗೆ ಬೀಳ್ಕೊಡುಗೆ ಪಂದ್ಯ P11

### ಏಷ್ಯನ್ ಕ್ರೀಡಾಕೂಟದಲ್ಲಿ 4x400 ಮೀ. ರಿಲೇಯಲ್ಲಿ ಚಿನ್ನದ ಪದಕ

# ಪೂವಮ್ಮಗೆ ಮಂಗಳೂರಲ್ಲಿ ಸಂಭ್ರಮದ ಸ್ವಾಗತ

**ವಿಕ ಸುದ್ದಿಲೋಕ** ಮಂಗಳೂರು

ಇಂಡೋನೇಷ್ಯಾದ ಜಕಾರ್ತಾದಲ್ಲಿ ನಡೆದ 18ನೇ ಏಷ್ಯನ್ ಗೇಮ್ಸ್ ಕ್ರೀಡಾಕೂಟದಲ್ಲಿ ಮಹಿಳಾ ವಿಭಾಗದ 4x400 ಮೀ. ರಿಲೇಯಲ್ಲಿ ಚಿನ್ನದ ಪದಕ ಹಾಗೂ 4x400 ಮೀ. ಮಿಶ್ರ ರಿಲೇಯಲ್ಲಿ ಬೆಳ್ಳಿ ಪದಕ ಪಡೆದ ಭಾರತ ತಂಡದ ಪ್ರಮುಖ ಓಟಗಾರ್ತಿ ಎಂ.ಆರ್. ಪೂವಮ್ಮ ಅವರನ್ನು ಗುರುವಾರ ಮಂಗಳೂರು ವಿಮಾನ ನಿಲ್ದಾಣದಲ್ಲಿ ಸಂಭ್ರಮದಿಂದ ಸ್ವಾಗತಿಸಲಾಯಿತು.

ದ.ಕ. ಜಿಲ್ಲಾಡಳಿತ, ದ.ಕ. ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಆಶ್ರಯದಲ್ಲಿ ನಡೆದ ಸ್ವಾಗತ ಸಂದರ್ಭ ಶಾಸಕ ವೇದವ್ಯಾಸ ಕಾಮತ್, ಮಾಜಿ ಸಚಿವ ಅಭಯಚಂದ್ರ ಜೈನ್, ಮನಪಾ ಸದಸ್ಯರಾದ ಪ್ರೇಮಾನಂದ ಶೆಟ್ಟಿ, ರೂಪಾ ಡಿ. ಬಂಗೇರ, ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ. ಎಂ. ಮೋಹನ್ ಆಳ್ವ, ಸಹ್ಯಾದ್ರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಂಜುನಾಥ ಭಂಡಾರಿ, ಪೂವಮ್ಮ ಅವರ ಪೋಷಕರು, ಕ್ರೀಡಾ ತರಬೇತುದಾರರು, ಕ್ರೀಡಾಧಿಕಾರಿ ಪ್ರದೀಪ್ ಡಿಸೋಜ, ಬಿಜೆಪಿಯ ರವಿಶಂಕರ್ ಮಿಜಾರು, ನಿತಿನ್ ಕುಮಾರ್, ಸಂಜಯ ಪ್ರಭು, ಪ್ರಭಾ ಮಾಲಿನಿ, ರಮೇಶ್ ಕಂಡೆಟ್ಟು, ಭಾಸ್ಕರಚಂದ್ರ ಶೆಟ್ಟಿ, ವಸಂತ ಜೆ. ಪೂಜಾರಿ, ಭರತ್, ಕಿರಣ್ ರೈ ಉಪಸ್ಥಿತರಿದ್ದು, ಅಭಿನಂದಿಸಿದರು.

**ಕೊಡಗಿಗೆ ಪದಕ ಅರ್ಪಣೆ:** ಪೋಷಕರ ಪ್ರೋತ್ಸಾಹ, ಬೆಂಬಲದಿಂದಾಗಿಯೇ ನಾನು ಇಂದು ಈ ಸಾಧನೆ ಮಾಡಲು ಸಾಧ್ಯವಾಗಿದೆ. ಅದಕ್ಕಾಗಿ ಪ್ರಥಮವಾಗಿ ನನ್ನ ಈ ಪದಕಗಳು ಪೋಷಕರು ಮತ್ತು ಈ ಬಾರಿ ಕೊಡಗು ಭಾರೀ ಜಲ ಪ್ರವಾಹಕ್ಕೆ ತುತ್ತಾಗಿರುವುದರಿಂದ ಅಲ್ಲಿಯ ಜನರಿಗೆ ಅರ್ಪಿಸುತ್ತೇನೆ ಎಂದು ಅಂತಾರಾಷ್ಟ್ರೀಯ ಅಥ್ಲೀಟ್ ಎಂ.ಆರ್. ಪೂವಮ್ಮ ಪ್ರತಿಕ್ರಿಯೆ ನೀಡಿದರು.

ತವರಿನ ಸ್ವಾಗತಕ್ಕೆ ತುಂಬಾ ಖುಷಿಯಾಗುತ್ತಿದೆ. 2014ರಲ್ಲಿಯೂ ಇದೇ ರೀತಿಯಾದ ಸ್ವಾಗತ ದೊರಕಿತ್ತು. ಮುಂದಿನ ವರ್ಷ ಏಷ್ಯನ್ ಚಾಂಪಿಯನ್‌ಶಿಪ್ ಮತ್ತು ವಿಶ್ವ ಚಾಂಪಿಯನ್‌ಶಿಪ್‌ಗೆ ತಯಾರಿ ಆಗಬೇಕಾಗಿದೆ. ತರಬೇತಿ ಶಿಬಿರ ಮುಂದಿನ ಅಕ್ಟೋಬರ್‌ನಲ್ಲಿ ನಿರ್ಧಾರವಾಗಲಿದೆ. 2020ರಲ್ಲಿ ಒಲಿಂಪಿಕ್ಸ್‌ನಲ್ಲೂ ಭಾಗವಹಿಸುವ ಇರಾದೆ ಇದೆ. ಅದಕ್ಕಾಗಿ ಮುಂದಿನ ವರ್ಷದಿಂದ ತರಬೇತಿ ಆರಂಭವಾಗಲಿದೆ ಎಂದರು.

ಪ್ರಧಾನಿ ಹಾಗೂ ಕ್ರೀಡಾ ಸಚಿವರನ್ನು ಬುಧವಾರ ಹೊಸದಿಲ್ಲಿಯಲ್ಲಿ ಭೇಟಿಯಾಗಿದ್ದು, ಅವರು ಸಾಕಷ್ಟು ಪ್ರೋತ್ಸಾಹ ನೀಡಿದ್ದು, ನೆರವು ನೀಡುವ ಭರವಸೆಯನ್ನೂ ನೀಡಿದ್ದಾರೆ ಎಂದರು.

ಪೂವಮ್ಮ ಅವರಿಗೆ ಹೂವಿನ ಹಾರ ಹಾಕಿ ಅಭಿನಂದಿಸಲಾಯಿತು. ಪೂವಮ್ಮ ಅವರಿಗೆ ತಾಯಿ ಜಾಜಿ ಅವರು ಮುತ್ತಿಡುವ ಮೂಲಕ ತಮ್ಮ ಖುಷಿ ಹಂಚಿಕೊಂಡರು.



ಎಂ.ಆರ್. ಪೂವಮ್ಮ ಅವರನ್ನು ಗುರುವಾರ ಮಂಗಳೂರು ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಲಾಯಿತು.

## ನಿವೇಶನ, ಗರಿಷ್ಠ ಪ್ರೋತ್ಸಾಹಧನಕ್ಕೆ ಆಗ್ರಹ

ಏಷ್ಯನ್ ಗೇಮ್ಸ್ ಕ್ರೀಡಾಕೂಟದಲ್ಲಿ ಬಂಗಾರದ ಪದಕ ಗಳಿಸಿ ರಾಜ್ಯ, ರಾಷ್ಟ್ರ, ಮಂಗಳೂರು ನಗರಕ್ಕೆ ಕೀರ್ತಿ ತಂದಿರುವ ಪೂವಮ್ಮ ಅವರಿಗೆ ಮಂಗಳೂರು ನಗರದಲ್ಲಿ ಸರಕಾರಿ ನಿವೇಶನ ಮತ್ತು 1 ಕೋಟಿ ರೂ. ಪ್ರೋತ್ಸಾಹಧನವಾಗಿ ನೀಡಬೇಕು ಎಂದು ಮಂಗಳೂರು ನಗರ ದಕ್ಷಿಣ ಶಾಸಕ ಡಿ. ವೇದವ್ಯಾಸ ಕಾಮತ್ ರಾಜ್ಯ ಸರಕಾರಕ್ಕೆ ಮನವಿ ಮಾಡಿದ್ದಾರೆ.

ಮಂಗಳೂರು ವಿಮಾನ ನಿಲ್ದಾಣದಲ್ಲಿ ಪೂವಮ್ಮ ಅವರನ್ನು ಸ್ವಾಗತಿಸಿ ಮಾತನಾಡಿದ ಅವರು, ಪೂವಮ್ಮ ಅವರು ದೇಶ, ರಾಜ್ಯ, ಮಂಗಳೂರಿಗೆ ಕೀರ್ತಿ ತಂದ ಕ್ರೀಡಾಪಟು. ಅವರು ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶವನ್ನು ಪ್ರತಿನಿಧಿಸಿ ಪದಕಗಳನ್ನು ಗಳಿಸಿದ್ದಾರೆ. ಅವರಿಗೆ ಮಂಗಳೂರು ನಗರದಲ್ಲಿ ಸರಕಾರಿ ನಿವೇಶನ ಕೊಡುವ ಮೂಲಕ ಸರಕಾರ ಅವರನ್ನು ಪ್ರೋತ್ಸಾಹಿಸಬೇಕು. ಪೂವಮ್ಮ ಕುಟುಂಬದವರು ನಾಲ್ಕು ವರ್ಷಗಳ ಹಿಂದೆಯೇ ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ನಿವೇಶನಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಅದನ್ನು ಆದಷ್ಟು ಬೇಗ ಮಂಜೂರು ಮಾಡಬೇಕು ಎಂದು ಹೇಳಿದ್ದಾರೆ.

ಪೂವಮ್ಮ ಅವರು ಮಾಡಿರುವ ಸಾಧನೆಯ ಹಿಂದೆ ಅಪಾರ ಶ್ರಮ ಅಡಗಿದೆ. ಅದನ್ನು ಪರಿಗಣಿಸಿ ಪೂವಮ್ಮ ಅವರಿಗೆ ಕನಿಷ್ಠ 1 ಕೋಟಿ ರೂ.ವನ್ನು ರಾಜ್ಯ ಸರಕಾರ ನೀಡಬೇಕು. ಇದರಿಂದ ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶದ ಹೆಸರನ್ನು ಉನ್ನತ ಸ್ಥಾನಕ್ಕೆ ಏರಿಸಲು ಪೂವಮ್ಮ ಅವರಿಗೆ ಇನ್ನಷ್ಟು ಸ್ಫೂರ್ತಿ ಸಿಕ್ಕಿದ್ದಂತೆ ಆಗುತ್ತದೆ ಎಂದರು.

ಈ ಕುರಿತು ಮುಖ್ಯಮಂತ್ರಿ ಕುಮಾರಸ್ವಾಮಿಯವರನ್ನು ಭೇಟಿಯಾಗಿ ವಿನಂತಿಸುವುದಾಗಿ ತಿಳಿಸಿದರು.

www.varthabharati.in
ಜನದನಿಯ ಸಾರಥಿ
epaper.varthabharati.in
ವಾರ್ತಾ ಭಾರತಿ
7 ಸೆಪ್ಟಂಬರ್ 2018
ಶುಕ್ರವಾರ
◆ ಮಂಗಳೂರು ◆ ಬೆಂಗಳೂರು ◆ ಶಿವಮೊಗ್ಗ
VARTHABHARATHI KANNADA DAILY
/ Varthabharati
REGD.NO: MNG/958/2016-18 RNI NO. KAR KAN/2003/11378
ಸಂಪುಟ 16 ● ಸಂಚಿಕೆ 10 ● ಮಂಗಳೂರು ● ಪುಟ 12

HOME
FURNITURE & IN
Furniture | Interio
1 Gram Gold Coin on a
Double Mattress
Near Karavali Junct

# ಏಶ್ಯಾಡ್‌ನಲ್ಲಿ ಚಿನ್ನ ಗೆದ್ದ ಪೂವಮ್ಮ ಮಂಗಳೂರಿಗೆ

## ಅದ್ದೂರಿ ಸ್ವಾಗತ, ಅಭಿನಂದನೆ



ಮಂಗಳೂರು, ಸೆ.6: ಇಂಡೋನೇಶ್ಯದ ಜಕಾರ್ತದಲ್ಲಿ ಇತ್ತೀಚೆಗೆ ಕೊನೆಗೊಂಡ 18ನೇ ಏಶ್ಯನ್ ಕ್ರೀಡಾಕೂಟದಲ್ಲಿ ರಿಲೇಯಲ್ಲಿ ಚಿನ್ನದ ಪದಕ ಹಾಗೂ ಮಿಶ್ರ ರಿಲೇಯಲ್ಲಿ ಬೆಳ್ಳಿ ಪದಕ ಗೆದ್ದಿರುವ ಭಾರತೀಯ ತಂಡದ ಪ್ರಮುಖ ಓಟಗಾರ್ತಿ ಎಂ.ಆರ್.ಪೂವಮ್ಮ ಅವರಿಂದು ತವರಿಗೆ ಆಗಮಿಸಿದ್ದು, ಮಂಗಳೂರು ವಿಮಾನ ನಿಲ್ದಾಣದಲ್ಲಿ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ದ.ಕ. ಜಿಲ್ಲಾಡಳಿತ, ದ.ಕ. ಜಿಪಂ, ಮನಪಾ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಆಶ್ರಯದಲ್ಲಿ ನಡೆದ ಸ್ವಾಗತ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ವೇದವ್ಯಾಸ ಕಾಮತ್, ಏಶ್ಯನ್ ಗೇಮ್ಸ್‌ನಲ್ಲಿ ಚಿನ್ನ ಗೆದ್ದು ರಾಜ್ಯ, ರಾಷ್ಟ್ರ, ಮಂಗಳೂರು ನಗರಕ್ಕೆ ಕೀರ್ತಿ ತಂದಿರುವ ಪೂವಮ್ಮರಿಗೆ ಮಂಗಳೂರು ನಗರದಲ್ಲಿ ಸರಕಾರಿ ನಿವೇಶನ ಮತ್ತು ಒಂದು ಕೋಟಿ ರೂ. ಪ್ರೋತ್ಸಾಹಧನವಾಗಿ ನೀಡಬೇಕು ಎಂದು ಶಾಸಕ ಡಿ.ವೇದವ್ಯಾಸ ಕಾಮತ್ ರಾಜ್ಯ ಸರಕಾರಕ್ಕೆ ಮನವಿ ಮಾಡಿದ್ದಾರೆ.

ಮಂಗಳೂರು ವಿಮಾನ ನಿಲ್ದಾಣದಲ್ಲಿ ಪೂವಮ್ಮರನ್ನು ಸ್ವಾಗತಿಸಿ ಮಾತನಾಡಿದ ಅವರು ಪೂವಮ್ಮ ಕುಟುಂಬದವರು ನಾಲ್ಕು ವರ್ಷಗಳ ಹಿಂದೆಯೇ ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ನಿವೇಶನಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಅವರಿಗೆ ಮಂಗಳೂರು ನಗರದಲ್ಲಿ ಸರಕಾರಿ ನಿವೇಶನ ಕೊಡುವ ಮೂಲಕ ಸರಕಾರ ಅವರನ್ನು ಪ್ರೋತ್ಸಾಹಿಸಬೇಕಿದೆ. ಈ ಬಗ್ಗೆ ಮುಖ್ಯಮಂತ್ರಿ ಕುಮಾರಸ್ವಾಮಿಯವರನ್ನು ಭೇಟಿಯಾಗಿ ವೈಯಕ್ತಿಕವಾಗಿ ವಿನಂತಿಸುವುದಾಗಿ ಅವರು ತಿಳಿಸಿದ್ದಾರೆ.

ಮಾಜಿ ಸಚಿವ ಕೆ.ಅಭಯಚಂದ್ರ ಜೈನ್, ಮನಪಾ ಸದಸ್ಯರಾದ ಪ್ರೇಮಾನಂದ ಶೆಟ್ಟಿ, ರೂಪಾ ಡಿ. ಬಂಗೇರ, ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ.ಮೋಹನ್ ಆಳ್ವ, ಸಹ್ಯಾದ್ರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಂಜುನಾಥ ಭಂಡಾರಿ, ಕ್ರೀಡಾಧಿಕಾರಿ ಪ್ರದೀಪ್ ಡಿಸೋಜ ಹಾಗೂ ಪೂವಮ್ಮರ ಪೋಷಕರು, ಕ್ರೀಡಾ ತರಬೇತುದಾರರು ಈ ಸಂದರ್ಭ ಉಪಸ್ಥಿತರಿದ್ದು, ಅಭಿನಂದಿಸಿದರು.






# ಉದಯವಾಣಿ

ಜನಮನದ ಜೀವನಾಡಿ

ಮಣಿಪಾಲ । ಬೆಂಗಳೂರು । ಹುಬ್ಬಳ್ಳಿ । ಕಲಬುರಗಿ । ದಾವಣಗೆರೆ । ಮುಂಬಯಿ



CENTRAL LIBRARY








Regd.No.UDP/1259/2018-20 | udayavani.com | UDAYAVANI – KANNADA DAILY – MANIPAL ಮಣಿಪಾಲ, ಶುಕ್ರವಾರ, ಸೆಪ್ಟಂಬರ್ 7, 2018 ಬೆಲೆ: ₹ 5-00 ವಿದೇಶ ಬೆಲೆ: ₹ 6-00 ಪುಟಗಳು 14+8+4 (UDP


## ಚಿನ್ನದ ಯುವತಿಗೆ ಅದ್ದೂರಿ ಸ್ವಾಗತ

ಮಂಗಳೂರು, ಸೆ. 6: ಏಶ್ಯನ್ ಗೇಮ್ಸ್‌ನ ರಿಲೇಯಲ್ಲಿ ದೇಶಕ್ಕೆ ಬಂಗಾರದ ಪದಕ ತಂದುಕೊಟ್ಟ ಕರಾವಳಿ ಮೂಲದ ಪೂವಮ್ಮ ಗುರುವಾರ ಮಂಗಳೂರಿಗೆ ಆಗಮಿಸಿದಾಗ ಭವ್ಯ ಸ್ವಾಗತ ನೀಡಲಾಯಿತು.

ಗುರುವಾರ ಮಧ್ಯಾಹ್ನ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರನ್ನು ತಂದೆ, ತಾಯಿ, ಕುಟುಂಬ ವರ್ಗದವರು, ವಿದ್ಯಾರ್ಥಿಗಳು, ಸ್ಥಳೀಯ ಜನಪ್ರತಿನಿಧಿಗಳು, ಗಣ್ಯರು ಬರಮಾಡಿಕೊಂಡರು. ಪೂವಮ್ಮ ತನ್ನ ತಾಯಿ ಜಾಜಿ ಅವರಿಗೆ ಮುತ್ತಿಕ್ಕುವ ಮೂಲಕ ಪದಕ ಸಂಭ್ರಮವನ್ನು ಹಂಚಿಕೊಂಡರು. ತಂದೆ ರಾಜು, ಸಹೋದರ ಮಂಜು, ಸಹೋದರಿ ಲಿಖಿತಾ ಸಾಕ್ಷಿಯಾಗಿದ್ದರು. ಬಳಿಕ ನಗರದ ಉರ್ವಾಸ್ಟೋರ್ ಬಳಿಯಿರುವ ತಮ್ಮ ಮನೆಗೆ ಬಂದ ಪೂವಮ್ಮ ಅವರಿಗೆ ಸ್ನೇಹಿತರು, ನೆರೆಹೊರೆಯವರು, ಅಪಾರ ಸಂಖ್ಯೆಯ ಜನರು ಭವ್ಯ ಸ್ವಾಗತ ಕೋರಿದರು.

**ಪೂವಮ್ಮ ಮನೆಗೆ ನಳಿನ್**

ಸಂಸದ ನಳಿನ್ ಕುಮಾರ್ ಕಟೀಲು ಅವರು ಪೂವಮ್ಮ ಅವರ ಮನೆಗೆ ಭೇಟಿ ನೀಡಿ ಶುಭ ಹಾರೈಸಿದರು.

ಶಾಸಕ ಡಿ. ವೇದವ್ಯಾಸ ಕಾಮತ್ ಕೂಡ ಪೂವಮ್ಮ ಮನೆಗೆ ತೆರಳಿ ಅಭಿನಂದಿಸಿದರು. ಪೂವಮ್ಮ ಸಾಧನೆಯ ಹಿಂದೆ ಕಠಿನ ಶ್ರಮ ಅಡಗಿದೆ. ಅದನ್ನು ಪರಿಗಣಿಸಿ ಅವರಿಗೆ ರಾಜ್ಯ ಸರಕಾರವು ಕನಿಷ್ಠ 1 ಕೋಟಿ ರೂ. ನಗದು ಬಹುಮಾನ ನೀಡಬೇಕು. ನಗರದಲ್ಲಿ ಸರಕಾರಿ ನಿವೇಶನ ನೀಡಿ ಪ್ರೋತ್ಸಾಹಿಸಬೇಕು ಎಂದರಲ್ಲದೆ, ಈ ಬಗ್ಗೆ ಸಿಎಂ ಅವರಲ್ಲಿ ಮನವಿ ಮಾಡಲಾಗುವುದು ಎಂದರು.

ಮಾಜಿ ಸಚಿವ ಅಭಯಚಂದ್ರ ಜೈನ್, ಆಳ್ವಾಸ್ ಶಿಕ್ಷಣ ಸಂಸ್ಥೆ ಮುಖ್ಯಸ್ಥ ಮೋಹನ ಆಳ್ವ, ಸಹ್ಯಾದ್ರಿ ಕಾಲೇಜು ಅಧ್ಯಕ್ಷ ಮಂಜುನಾಥ ಭಂಡಾರಿ, ಬಿಜೆಪಿಯ ರವಿಶಂಕರ್ ಮಿಜಾರ್, ನಿತಿನ್ ಕುಮಾರ್, ಸಂಜಯ ಪ್ರಭು, ಪ್ರಭಾ ಮಾಲಿನಿ, ರಮೇಶ್ ಕಂಡೆಟ್ಟು, ಭಾಸ್ಕರಚಂದ್ರ ಶೆಟ್ಟಿ, ವಸಂತ ಜೆ. ಪೂಜಾರಿ, ಪ್ರೇಮಾನಂದ ಶೆಟ್ಟಿ, ಪೂರ್ಣಿಮಾ, ರೂಪಾ ಡಿ. ಬಂಗೇರ ಸಹಿತ ಪ್ರಮುಖರು ವಿಮಾನನಿಲ್ದಾಣದಲ್ಲಿ ಹಾಜರಿದ್ದರು.

> **ಪೂವಮ್ಮ ಅವರಿಗೆ ರಾಜ್ಯ ಸರಕಾರದ ವತಿಯಿಂದ ನಿವೇಶನ ಸಿಗದ ವಿಚಾರ ತಿಳಿದಿದೆ. ಈ ಬಗ್ಗೆ ಸ್ಥಳೀಯ ಶಾಸಕರ ಬಳಿ ಮಾತನಾಡಿ, ರಾಜ್ಯ ಸರಕಾರದ ಗಮನಕ್ಕೆ ತರಲು ಪ್ರಯತ್ನಿಸುತ್ತೇನೆ.**
>
> **- ನಳಿನ್ ಕುಮಾರ್ ಕಟೀಲು,** ಸಂಸದ

### ಪ್ರಧಾನಿಗೂ ಕ್ರೀಡೆ ಬಗ್ಗೆ ಇದೆ ಆಸಕ್ತಿ

ಚಿನ್ನದ ಪದಕ ಗೆದ್ದಿರುವುದು ತುಂಬಾ ಖುಷಿ ತಂದಿದೆ. ಬುಧವಾರ ಪ್ರಧಾನಿ ಮೋದಿ ಅವರನ್ನು ಭೇಟಿ ಮಾಡಿದ್ದೆ, ಎರಡನೇ ಬಾರಿ ಅವರ ಭೇಟಿಗೆ ಅವಕಾಶ ಸಿಕ್ಕಿತ್ತು. ಅವರಿಗೂ ಕ್ರೀಡಾ ಕ್ಷೇತ್ರದ ಬಗ್ಗೆ ಒಲವಿದೆ. ವರ್ಲ್ಡ್ ಏಶ್ಯನ್ ಸಹಿತ ಒಲಿಂಪಿಕ್ಸ್ ಕ್ರೀಡಾಕೂಟದ ಅಭ್ಯಾಸಕ್ಕೆ ಪ್ರೋತ್ಸಾಹ ನೀಡುವುದಾಗಿ ಹೇಳಿದ್ದಾರೆ. ಮನೆಗೆ ಬಾರದೆ ಸುಮಾರು 8 ತಿಂಗಳು ಆಗಿತ್ತು. ಇಲ್ಲಿನ ನನ್ನ ಫೇವರಿಟ್ ಆಹಾರ ಮಿಸ್ ಮಾಡಿಕೊಳ್ಳುತ್ತಿದ್ದೆ, ಈಗ ಚಿನ್ನ ಗೆದ್ದು ಮನೆಗೆ ಮರಳುತ್ತಿರುವುದಕ್ಕೆ ಬಹಳ ಹೆಮ್ಮೆ ಆಗುತ್ತಿದೆ. ಒಂದು ತಿಂಗಳು ವಿಶ್ರಾಂತಿ ಪಡೆದು ಬಳಿಕ ಮಂಗಳಾ ಕ್ರೀಡಾಂಗಣದಲ್ಲಿ ಕ್ರೀಡಾಭ್ಯಾಸ ಮುಂದುವರಿಸುತ್ತೇನೆ ಎಂದು ಪೂವಮ್ಮ ಅವರು 'ಉದಯವಾಣಿ' ಜತೆ ಸಂತಸ ಹಂಚಿಕೊಂಡರು.

2018 ಸಂಪುಟ 40, ಸಂಚಿಕೆ 173, ಪುಟಗಳು 12+4+4, ಬೆಂಗಳೂರು-ಮಂಗಳೂರು-ಶಿವಮೊಗ್ಗ-ಹುಬ್ಬಳ್ಳಿ REG.No.MNG / 121 / 2018-20 Posted at kodialbail P.O / RNI:29813/78/ Daily
ಬೆಲೆ ₹5.00
www.hosadigantha.com
editor@hosadigantha.in


# ಹೊಸ ದಿಗಂತ

ರಾಷ್ಟ್ರ ಜಾಗೃತಿಯ ದೈನಿಕ

ತೈಲ ಬೆಲೆ ಏರಿಕೆ ತಡೆಗೆ ಮೋದಿ ಸರ್ಕಾರ ಯತ್ನ ೧೦

ವಕ್ಫ್ ಆಸ್ತಿ ಕಬಳಿಕೆ: ಸಿಬಿಐ ತನಿಖೆಗೆ ಬಿಜೆಪಿ ಆಗ್ರಹ ೪

೬ ಮೇಕ್ ಇನ್ ಇಂಡಿಯಾದಲ್ಲಿ ಪಾಲ್ಗೊಳ್ಳಿ: ರಾಷ್ಟ್ರಪತಿ ಆಹ್ವಾನ



### ಏಶಿಯನ್ ಗೇಮ್ಸ್‌ನಲ್ಲಿ ಚಿನ್ನ ಗೆದ್ದ ಪ್ರತಿಭೆಗೆ ಅದ್ದೂರಿ ಸ್ವಾಗತ

# ಗೆದ್ದ ಚಿನ್ನವನ್ನು ಹೆತ್ತವರಿಗೆ, ಕೊಡಗು ಸಂತ್ರಸ್ತರಿಗೆ ಅರ್ಪಿಸುವೆ: ಪೂವಮ್ಮ

• ದಿಗಂತ ವರದಿ, ಮಂಗಳೂರು

ಜಕಾರ್ತದಲ್ಲಿ ಇತ್ತೀಚೆಗೆ ನಡೆದ ಏಶಿಯನ್ ಗೇಮ್ಸ್ ಕ್ರೀಡಾಕೂಟದಲ್ಲಿ ರಿಲೇಯಲ್ಲಿ ಚಿನ್ನ ಮತ್ತು ಬೆಳ್ಳಿ ಪದಕ ಗೆಲ್ಲುವ ಮೂಲಕ ನಮ್ಮ ದೇಶ, ಕರ್ನಾಟಕ ಮತ್ತು ಕರಾವಳಿಗೆ ಕೀರ್ತಿ ತಂದ ಖ್ಯಾತ ಕ್ರೀಡಾ ಪಟು ಎಂ.ಆರ್.ಪೂವಮ್ಮ ಅವರನ್ನು ಮಂಗಳೂರು ವಿಮಾನ ನಿಲ್ದಾಣದಲ್ಲಿ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಈ ಸಂದರ್ಭ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಏಶಿಯನ್ ಗೇಮ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಿ ಚಿನ್ನದ ಪದಕ ಪಡೆದಿರುವುದಕ್ಕೆ ಹೆಮ್ಮೆಯಿದೆ. ಮುಂದೆ ವಿಶ್ವ ಚಾಂಪಿಯನ್ ಶಿಪ್‌ನಲ್ಲೂ ಇಂತಹುದೇ ಸಾಧನೆ ಮಾಡಬೇಕೆಂಬ ಮಹದಾಸೆ ಹೊಂದಿದ್ದೇನೆ ಎಂದರು.

ಏಶಿಯನ್ ಗೇಮ್ಸ್‌ನಲ್ಲಿ ಗೆದ್ದ ಚಿನ್ನದ ಪದಕವನ್ನು ಸದಾ ನನ್ನನ್ನು ಪ್ರೋತ್ಸಾಹಿಸುತ್ತಿರುವ ನನ್ನ ಹೆತ್ತವರು ಹಾಗೂ ಪ್ರಕೃತಿ ವಿಕೋಪದಿಂದ ಸಂತ್ರಸ್ತರಾದ ಕೊಡಗಿನ ಮಂದಿಗೆ ಅರ್ಪಿಸುತ್ತೇನೆ ಎಂದು ಪೂವಮ್ಮ ಹೇಳಿದರು.

ಪೂವಮ್ಮ ಅವರು ಮಂಗಳೂರು ವಿಮಾನ ನಿಲ್ದಾಣದಲ್ಲಿ ಬಂದಿಳಿಯುತ್ತಿದ್ದಂತೆ ಶಾಸಕ ಡಿ ವೇದವ್ಯಾಸ ಕಾಮತ್, ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ. ಮೋಹನ ಆಳ್ವ, ಸಹ್ಯಾದ್ರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ಮಂಜುನಾಥ ಭಂಡಾರಿ, ಪೂವಮ್ಮ ಅವರ ಹೆತ್ತವರು ಸೇರಿದಂತೆ ಅನೇಕ ಗಣ್ಯರು ಭವ್ಯ ಸ್ವಾಗತ ಕೋರಿದರು.

ಈ ಸಂದರ್ಭ ಬಿಜೆಪಿ ಮುಖಂಡರಾದ ರವಿಶಂಕರ್ ಮಿಜಾರ್, ನಿತಿನ್ ಕುಮಾರ್, ಸಂಜಯ ಪ್ರಭು, ಪ್ರಭಾ ಮಾಲಿನಿ, ರಮೇಶ್ ಕಂಡೆಟ್ಟು, ಭಾಸ್ಕರಚಂದ್ರ ಶೆಟ್ಟಿ, ವಸಂತ ಜೆ ಪೂಜಾರಿ, ಪ್ರೇಮಾನಂದ ಶೆಟ್ಟಿ, ಪೂರ್ಣಿಮಾ, ರೂಪಾ ಡಿ ಬಂಗೇರ ಉಪಸ್ಥಿತರಿದ್ದರು.





## ಸರಕಾರ ಕೋಟಿ ರೂ. ಪ್ರೋತ್ಸಾಹಧನ ನೀಡಲಿ

ಈ ಸಂದರ್ಭ ಮಾತನಾಡಿದ ಶಾಸಕ ವೇದವ್ಯಾಸ ಕಾಮತ್, ಬಂಗಾರದ ಪದಕ ಗಳಿಸಿ ರಾಜ್ಯ, ರಾಷ್ಟ್ರ ಮಂಗಳೂರು ನಗರಕ್ಕೆ ಕೀರ್ತಿ ತಂದಿರುವ ಪೂವಮ್ಮ ಅವರಿಗೆ ಮಂಗಳೂರು ನಗರದಲ್ಲಿ ಸರಕಾರಿ ನಿವೇಶನ ಮತ್ತು ಒಂದು ಕೋಟಿ ರೂಪಾಯಿಯನ್ನು ಸರಕಾರ ಪ್ರೋತ್ಸಾಹಧನವಾಗಿ ನೀಡಬೇಕು. ಈ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಗಮನಸೆಳೆಯುವುದಾಗಿ ತಿಳಿಸಿದರು.

ಪೂವಮ್ಮ ಅವರು ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶವನ್ನು ಪ್ರತಿನಿಧಿಸಿ ವಿವಿಧ ಕ್ರೀಡಾಕೂಟಗಳಲ್ಲಿ ಪದಕಗಳನ್ನು ಗಳಿಸಿದ್ದಾರೆ. ಪೂವಮ್ಮ ಕುಟುಂಬದವರು ನಾಲ್ಕು ವರ್ಷಗಳ ಹಿಂದೆಯೇ ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ನಿವೇಶನಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಇನ್ನು ತಡ ಮಾಡದೇ ಆದಷ್ಟು ಬೇಗ ಪೂವಮ್ಮ ಅವರಿಗೆ ನಿವೇಶನ ಮಂಜೂರು ಮಾಡಬೇಕು. ಪೂವಮ್ಮ ಅವರು ಮಾಡಿರುವ ಸಾಧನೆಯ ಹಿಂದೆ ಅಪಾರ ಶ್ರಮ ಅಡಗಿದೆ. ಅದನ್ನು ಪರಿಗಣಿಸಿ ಪೂವಮ್ಮ ಅವರಿಗೆ ಕನಿಷ್ಟ ಒಂದು ಕೋಟಿ ರೂಪಾಯಿಯನ್ನು ರಾಜ್ಯ ಸರಕಾರ ನೀಡಬೇಕು. ಇದರಿಂದ ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶದ ಹೆಸರನ್ನು ಉನ್ನತ ಸ್ಥಾನಕ್ಕೆ ಏರಿಸಲು ಪೂವಮ್ಮ ಅವರಿಗೆ ಇನ್ನಷ್ಟು ಸ್ಫೂರ್ತಿ ಸಿಕ್ಕಿದಂತೆ ಆಗುತ್ತದೆ ಎಂದವರು ಹೇಳಿದರು.